**Bangalore**
**Regional News**
**09.09.2024 / 14.30 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಬೆಂಗಳೂರಿನ ಅಚ್ಚು ಮತ್ತು ಗಾಲಿ ಉತ್ಪಾದನಾ ಪ್ರಮಾಣ ಮೂರು ತಿಂಗಳಲ್ಲಿ ದುಪ್ಪಟ್ಟುಗೊಳಿಸುವ ಗುರಿ -ಕೇಂದ್ರ ಸಚಿವ ವಿ.ಸೋಮಣ್ಣ

೨. ಸಿಂಗಾಪುರ ಉದ್ಯಮಿಗಳಿಗೆ ಅಗತ್ಯ ಮೂಲ ಸೌಕರ್ಯ ಒದಗಿಸಲು ರಾಜ್ಯ ಸರ್ಕಾರ ಬದ್ಧ- ಸಚಿವ ಎಂ.ಬಿ.ಪಾಟೀಲ್

೩. ಕಲಬುರಗಿಯಲ್ಲಿ ನಡೆಯುವ ಸಂಪುಟ ಸಭೆಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿ ಕುರಿತಂತೆ ಚರ್ಚೆ- ಸಚಿವ ಪ್ರಿಯಾಂಕ್ ಖರ್ಗೆ

೪. ಯುಪಿಎಸ್‌ಸಿ-ಎಸ್‌ಎಸ್‌ಸಿ ಪರೀಕ್ಷೆಯಂದೆ ಪಿಎಸ್‌ಐ ಪರೀಕ್ಷೆ; ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅಸಮಾಧಾನ

**<><*<><>*><>**

ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ವಿಧಾನಸೌಧದಲ್ಲಿಂದು ಉಪನಗರ ರೈಲ್ವೆ ಯೋಜನೆ ಮತ್ತು ರಾಜ್ಯದ ವಿವಿಧ ರೈಲ್ವೆಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಸಭೆಯಲ್ಲಿ ಸಚಿವ ಎಂ.ಬಿ.ಪಾಟೀಲ್ ಸೇರಿದಂತೆ ಹಿರಿಯ ಅಧಿಕಾರಿಗಳೊಂದಿಗೆ ರಾಜ್ಯದ ಪ್ರಮುಖ ರೈಲ್ವೆ ಯೋಜನೆಗಳ ಬಗ್ಗೆ ಕೇಂದ್ರ ಸಚಿವರು ಸಮಾಲೋಚನೆ ನಡೆಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೨೦೧೪ರ ನಂತರ ದೇಶದಲ್ಲಿ ರೈಲ್ವೆ ಪ್ರಯಾಣಿಕರ ಮತ್ತು ಸರಕು ಸಾಗಣೆ ಚುರುಕುಗೊಳಿಸಲು ಹಲವಾರು ಉಪಕ್ರಮಗಳನ್ನು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಕೈಗೊಂಡಿದೆ. ಅದೇ ರೀತಿ ವ್ಯಾಗನ್‌ಗಳ ತಯಾರಿಕೆ, ಐಷಾರಾಮಿ ವಂದೇ ಭಾರತ್ ರೈಲು ನಿರ್ಮಾಣ, ರೈಲ್ವೆ ಡಬ್ಲಿಂಗ್ ಮತ್ತು ವಿದ್ಯುದೀಕರಣ ಕಾರ್ಯಗಳು ತ್ವರಿತ ವೇಗದಲ್ಲಿ ಸಾಗಿವೆ. ಬೆಂಗಳೂರಿನ ಅಚ್ಚು ಮತ್ತು ಗಾಲಿ ಕಾರ್ಖಾನೆ ತನ್ನ ಉತ್ಪಾದನಾ ಮಟ್ಟವನ್ನು ಮತ್ತಷ್ಟು ಸುಧಾರಿಸಿದೆ. ಆಕ್ಸಿಲ್ ಕಾರ್ಖಾನೆಯ ಉತ್ಪಾದನಾ ಪ್ರಮಾಣ ಬರುವ ಮೂರು ತಿಂಗಳಲ್ಲಿ ದುಪ್ಪಟ್ಟುಗೊಳಿಸುವ ಗುರಿ ಹೊಂದಲಾಗಿದೆ ಎಂದು ಹೇಳಿದರು. ಪ್ರಧಾನಮಂತ್ರಿ ಗತಿಶಕ್ತಿ ಯೋಜನೆಯಡಿ ೨೦೩೦ರ ವೇಳೆಗೆ ಸರಕು ಸಾಗಣೆ ಸಾಮರ್ಥ್ಯವನ್ನು ೩ ಸಾವಿರ ಮೆಟ್ರಿಕ್ ಟನ್‌ಗೆ ಏರಿಸುವ ಗುರಿ ಹೊಂದಲಾಗಿದ್ದು, ಇದರಿಂದ ರಸ್ತೆ ಸಾರಿಗೆ ಮೇಲೆ ಉಂಟಾಗಿರುವ ಹೆಚ್ಚಿನ ಹೊರೆಯನ್ನು ತಗ್ಗಿಸುವ ಗುರಿಯಿದೆ. ೩ ಸಾವಿರ ಮೆಟ್ರಿಕ್ ಟನ್ ಗುರಿ ಮುಟ್ಟಲು ೩೦ ಸಾವಿರ ವ್ಯಾಗನ್‌ಗಳ ಅಗತ್ಯವಿದೆ ಹಾಗೂ ಈ ವ್ಯಾಗನ್‌ಗಳಿಗೆ ಅಗತ್ಯ ಗಾಲಿ ಮತ್ತು ಅಚ್ಚನ್ನು ಬೆಂಗಳೂರಿನ ಕಾರ್ಖಾನೆ ಪೂರೈಸಲಿದೆ. ಅದರ ವಾರ್ಷಿಕ ಉತ್ಪಾದನಾ ಸಾಮರ್ಥ್ಯ ಸುಮಾರು ೭೦ ಸಾವಿರ ಇರುವ ಹಿನ್ನೆಲೆ ಹೊಸ ಮಿಷನ್ ಘಟಕವನ್ನು ಬರುವ ಮೂರು ತಿಂಗಳಲ್ಲಿ ಸ್ಥಾಪಿಸುವ ಮೂಲಕ ಆಕ್ಸಿಲ್ ಉತ್ಪಾದನಾ ಸಾಮರ್ಥ್ಯವನ್ನು ಪ್ರಸ್ತುತ ೭೦ ಸಾವಿರದಿಂದ ೧ ಲಕ್ಷ ೧೨ ಸಾವಿರಕ್ಕೆ ವೃದ್ಧಿಸುವ

ಯೋಜನೆ ರೂಪಿಸಲಾಗಿದೆ. ಈ ಹೊಸ ಘಟಕ ಈಗಾಗಲೇ ಸಿದ್ಧವಾಗಿದ್ದು, ಅದರ ಕ್ರೋಢೀಕರಣ ನಡೆಯುತ್ತಿದೆ ಎಂದು ರೈಲ್ವೆ ಮೂಲಗಳು ತಿಳಿಸಿವೆ.

**<><*<><>*><>**

ಸಿಂಗಾಪುರದ ಉದ್ಯಮಿಗಳು ರಾಜ್ಯದಲ್ಲಿ ಹೆಚ್ಚಿನ ಬಂಡವಾಳ ಹೂಡಿಕೆ ಆಸಕ್ತಿ ತೋರಿದಲ್ಲಿ ಅವರಿಗೆ ಅಗತ್ಯವಾದ ಭೂಮಿ ಮತ್ತಿತರ ಮೂಲಸೌಕರ್ಯಗಳನ್ನು ಒದಗಿಸಲಾಗುವುದು ಎಂದು ಭಾರೀ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸಿಂಗಾಪುರ ಉದ್ಯಮಿಗಳ ಒಕ್ಕೂಟ ಉನ್ನತ ಮಟ್ಟದ ನಿಯೋಗದ ಸದಸ್ಯರೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ೨೦೨೫ರ ಫೆಬ್ರವರಿ ೧೨ರಿಂದ ೧೪ರವರೆಗೆ ಬೆಂಗಳೂರಿನಲ್ಲಿ ನಡೆಯಲಿರುವ 'ಜಾಗತಿಕ ಹೂಡಿಕೆದಾರರ ಸಮಾವೇಶ'ದಲ್ಲಿ ಸಿಂಗಪುರದ ಉದ್ದಿಮೆಗಳು ಭಾಗವಹಿಸಬೇಕು ಆಹ್ವಾನಿಸಿದರು. ಮಾತುಕತೆಯ ಸಂದರ್ಭದಲ್ಲಿ ಸಿಂಗಾಪುರದ ವಿವಿಧ ಉದ್ಯಮಗಳ ಪ್ರತಿನಿಧಿಗಳು ರಾಜ್ಯದಲ್ಲಿ ಹೂಡಿಕೆ ಮಾಡಲು ಆಸಕ್ತಿ ವ್ಯಕ್ತಪಡಿಸಿದರು. ಇದಕ್ಕೆ ಸ್ಪಂದಿಸಿದ ಸಚಿವರು ಭೂಮಿ ಮತ್ತು ಇತರ ಮೂಲಸೌಕರ್ಯಗಳನ್ನು ಒದಗಿಸುವ ಭರವಸೆ ನೀಡಿದರು. ಇದೇ ವೇಳೆ ನಿಯೋಗದ ನೇತೃತ್ವ ವಹಿಸಿದ್ದ ಸಿಂಗಪುರ್ ಬಿಜಿನೆಸ್ ಫೆಡರೇಶನ್‌ನ ಉಪಾಧ್ಯಕ್ಷ ಪ್ರಸೂನ್ ಮುಖರ್ಜಿ ಹಾಗೂ ಸದಸ್ಯರು, ಬೆಂಗಳೂರಿನಲ್ಲಿ 'ಸಿಂಗಪುರ ಬಿಜಿನೆಸ್ ಫೆಡರೇಶನ್'ನ ಕಚೇರಿಯನ್ನು ತೆರೆಯಲು ಆಸಕ್ತಿ ಹೊಂದಿರುವುದಾಗಿ ತಿಳಿಸಿದರು.

**<><*<><>*><>**

ಕಲಬುರಗಿಯಲ್ಲಿ ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ದಿಯ ಕುರಿತಂತೆ ಸಮಗ್ರವಾಗಿ ಚರ್ಚೆ ನಡೆಯಲಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಕಲಬುರಗಿಯಲ್ಲಿ ಮಾತನಾಡಿದ ಅವರು, ಈ ಭಾಗದ ಜನರ ಆಶಯದಂತೆ ಚರ್ಚೆ ನಡೆಸಿ ಅಭಿವೃದ್ದಿಯ ನೀಲನಕ್ಷೆ ತಯಾರಿಸಲಾಗುವುದು ಎಂದು ಹೇಳಿದ್ದಾರೆ. ಸಂಪುಟ ಸಭೆ ನಡೆಸುವ ಹಿನ್ನೆಲೆಯಲ್ಲಿ ಕಲ್ಯಾಣ ಕರ್ನಾಟಕ ಭಾಗಕ್ಕೆ ಅಗತ್ಯವಿರುವ ಯೋಜನೆಗಳ ಕುರಿತಂತೆ ಸಭೆಯಲ್ಲಿ ಚರ್ಚಿಸಲು ಈಗಾಗಲೇ ಸಂಬಂಧಿಸಿದ ಕ್ಷೇತ್ರಗಳ ಶಾಸಕರ ಹಾಗೂ ಅಧಿಕಾರಿಗಳ ಜೊತೆ ಎರಡು ಸುತ್ತಿನ ಸಭೆ ನಡೆಸಿ ಚರ್ಚಿಸಲಾಗಿದೆ ಎಂದರು. 'ನಿಪುಣ - ಕರ್ನಾಟಕ' ಯೋಜನೆಯಡಿಯಲ್ಲಿ ಯುವಕರಿಗೆ ಉದ್ಯೋಗ ಕಲ್ಪಿಸುವ ಮಹತ್ವಾಕಾಂಕ್ಷೆ ಇದ್ದು ಮುಂದಿನ ಎರಡು ತಿಂಗಳಲ್ಲಿ ಈ ಯೋಜನೆ ಜಾರಿಗೆ ಬರಲಿದೆ " ಎಂದು ತಿಳಿಸಿದ್ದಾರೆ. ಇದೇ ವೇಳೆ ಸಿದ್ದಾರ್ಥ ಟ್ರಸ್ಟ್ ಗೆ ಭೂಮಿ ಮಂಜೂರು ಪ್ರಕ್ರಿಯೆ ಎಲ್ಲವೂ ಕಾನೂನುಬದ್ಧವಾಗಿ ನಡೆದಿದೆ ಎಂದು ಪ್ರಿಯಾಂಕ್ ಖರ್ಗೆ ಸಮರ್ಥಿಸಿಕೊಂಡಿದ್ದಾರೆ.

**<><*<><>*><>**

ಬಿಜೆಪಿ ನಾಯಕರು ತಮ್ಮ ಪಕ್ಷದಲ್ಲಿರುವ ಅಸಮಾಧಾನ, ಬಿನ್ನಾಭಿಪ್ರಾಯ ಇತ್ಯಾದಿಗಳನ್ನು ಮೊದಲು ಸರಿಪಡಿಸಿಕೊಳ್ಳಲಿ. ಬಳಿಕ ಕಾಂಗ್ರೆಸ್ ಪಕ್ಷದ ಕುರಿತು ಅಭಿಪ್ರಯ ವ್ಯಕ್ತಪಡಿಸಲಿ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿರುಗೇಟು ನೀಡಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಬದಲಾವಣೆ ಕುರಿತಂತೆ ಪಕ್ಷದಲ್ಲಿ ಯಾವುದೇ ಚರ್ಚೆ ನಡೆದಿಲ್ಲ ಮುಡಾ ಪ್ರಕರಣ ನ್ಯಾಯಾಲಯದಲ್ಲಿದ್ದು, ತೀರ್ಪಿನ ಬಳಿಕ ಮುಂದಿನ ನಿರ್ಧಾರ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಈ ಬೆಳವಣಿಗೆಗಳಿಂದಾಗಿ ಆಡಳಿತದ ಮೇಲೆ ಯಾವುದೇ ರೀತಿಯ

ಪರಿಣಾಮ ಬೀರುತ್ತಿಲ್ಲ. ಪ್ರತಿಯೊಬ್ಬ ಸಚಿವರು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದ್ದು, ಆಡಳಿತ ಸುಗಮವಾಗಿ ನಡೆಯುತ್ತಿದೆ ಎಂದು ಸಮರ್ಥಿಸಿಕೊಂಡರು.

<><*<><>*><>

ಇದೇ ೨೨ರಂದು ಯುಪಿಎಸ್ಸಿ ಹಾಗೂ ಎಸ್.ಎಸ್.ಸಿ ಪರೀಕ್ಷೆಗಳ ದಿನಾಂಕ ನಿಗದಿಯಾಗಿದ್ದು, ಅದೇ ದಿನ ಪಿಎಸ್ಐ ಪರೀಕ್ಷೆ ನಡೆಸಲು ಮುಂದಾಗಿರುವ ರಾಜ್ಯ ಸರ್ಕಾರದ ಕ್ರಮ ಉದ್ಯೋಗಾಕಾಂಕ್ಷಿಗಳ ವಿರೋಧಿ ಧೋರಣೆಯಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಪರೀಕ್ಷಾರ್ಥಿಗಳು ಅವರಿಗೆ ಬರೆದ ಪತ್ರದ ಪ್ರತಿಯನ್ನು ಹಂಚಿಕೊಂಡಿರುವ ಅವರು, ವಿವಿಧ ಗ್ರೂಪ್ ಬಿ ಹುದ್ದೆಗಳಿಗೆ ಇದೇ ೧೪ ಮತ್ತು ೧೫ರಂದು ನಡೆಯಲಿರುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಾತ್ಕಾಲಿಕವಾಗಿ ಪ್ರವೇಶ ಪತ್ರದ ಡೌನ್ಲೋಡ್ ಮಾಡಿಕೊಳ್ಳುವ ಪ್ರಕ್ರಿಯೆಯನ್ನೂ ಸ್ಥಗಿತಗೊಳಿಸಿರುವುದು ಕೆಪಿಎಸ್‌ಸಿ ಹಾಗು ಸರ್ಕಾರ ಅಸಮರ್ಪಕ ಕಾರ್ಯನಿರ್ವಹಣೆಯನ್ನು ಬಯಲಿಗೆಳೆದಿದೆ ಎಂದಿದ್ದಾರೆ. ಉದ್ಯೋಗವನ್ನು ಅರಸಿ ಪರೀಕ್ಷೆಗಳನ್ನು ಬರೆಯುವ ಉದ್ಯೋಗಾಕಾಂಕ್ಷಿಗಳನ್ನು ಮತ್ತೊಮ್ಮೆ ಸಂಕಷ್ಟಕ್ಕೆ ದೂಡುವ ಮುನ್ನವೇ ರಾಜ್ಯದ ಸರ್ಕಾರ ಇದೇ ೨೨ ರಂದು ನಡೆಸಲು ನಿರ್ಧರಿಸಿರುವ ಪಿಎಸ್ಐ ಪರೀಕ್ಷೆ ಮುಂದೂಡಬೇಕು. ಗ್ರೂಪ್ ಬಿ ಹುದ್ದೆಗಳ ಪರೀಕ್ಷೆಯ ಪ್ರವೇಶ ಪತ್ರ ಹಾಗೂ ಪರೀಕ್ಷಾ ಕೇಂದ್ರಗಳ ಗೊಂದಲ ನಿವಾರಿಸಿ ಪರೀಕ್ಷಾರ್ಥಿಗಳಿಗೆ ತೊಂದರೆಗಳಾಗದಂತೆ ಎಚ್ಚರ ವಹಿಸುವಂತೆ ಬಿ.ವೈ.ವಿಜಯೇಂದ್ರ ಆಗ್ರಹಿಸಿದ್ದಾರೆ.

<><*<><>*><>

ವಿದ್ಯಾರ್ಥಿಗಳು ರಾಜ್ಯ, ರಾಷ್ಟ್ರ ಹಾಗೂ ಅಂತಾರಾಷ್ಟ್ರೀಯ ಕ್ರೀಡಾಪಟುಗಳಾಗಿ ಹೊರಹೊಮ್ಮಲು ಅನುಕೂಲವಾಗುವಂತೆ ಕ್ರೀಡಾ ಮೂಲಸೌಕರ್ಯಗಳನ್ನು ಒದಗಿಸಲು ರಾಜ್ಯ ಸರ್ಕಾರ ವಿಶೇಷ ಕಾಳಜಿ ವಹಿಸುತ್ತಿದೆ ಎಂದು ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವ ಶರಣಬಸಪ್ಪ ದರ್ಶನಾಪುರ್ ತಿಳಿಸಿದ್ದಾರೆ. ಯಾದಗಿರಿ ನಗರದ ಜಿಲ್ಲಾ ಕ್ರೀಡಾಂಗಣ ವ್ಯಾಪ್ತಿಯಲ್ಲಿ ಯುವಸಬಲೀಕರಣ ಹಾಗೂ ಕ್ರೀಡಾ ಇಲಾಖೆಯಿಂದ ರಾಜ್ಯ ವಲಯ ಅನುದಾನದಡಿ ನಿರ್ಮಿಸಲಾದ ವಸತಿನಿಲಯ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ೨ ಕೋಟಿ ೫೦ ಲಕ್ಷ ರೂಪಾಯಿ ವೆಚ್ಚದಲ್ಲಿ ಸುಸಜ್ಜಿತ ಕ್ರೀಡಾ ವಸತಿ ನಿಲಯ ಕಟ್ಟಡವನ್ನು ಇಂದು ಉದ್ಘಾಟಿಸಲಾಗಿದ್ದು ಇದರಿಂದ ಈ ಭಾಗದ ಬಡ ಮಕ್ಕಳಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಹೇಳಿದರು. ಜಿಲ್ಲೆಯ ೫ರಿಂದ ೭ನೇ ತರಗತಿಯವರೆಗಿನ ಮಕ್ಕಳಿಗೆ ಈ ವಸತಿನಿಲಯ ಸೌಲಭ್ಯ ನೆರವಾಗಲಿದೆ. ಕ್ರೀಡಾ ಪ್ರೋತ್ಸಾಹಕ್ಕಾಗಿ ಹಂತ ಹಂತವಾಗಿ ಕ್ರೀಡಾ ಮೂಲ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಬದ್ದವಾಗಿದೆ ಎಂದು ಹೇಳಿದರು.

<><*<><>*><>

ಅಪೌಷ್ಟಿಕತೆಯಿಂದ ಪೌಷ್ಟಿಕತೆಯ ಕಡೆಗೆ ಮಕ್ಕಳನ್ನು ಕೊಂಡೊಯ್ಯುವುದು ಹಾಗೂ ತಾಯಂದಿರಲ್ಲಿ ಸ್ತನಪಾನ ಕುರಿತು ಜಾಗೃತಿ ಮೂಡಿಸುವುದು ಪೋಷಣ್ ಅಭಿಯಾನದ ಪ್ರಮುಖ ಉದ್ದೇಶವಾಗಿದ್ದು, ಈ ತಿಂಗಳಿಡೀ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ದಾವಣಗೆರೆ ಶಿಶು ಅಭಿವೃದ್ಧಿ ಸಹಾಯಕ ಯೋಜನಾಧಿಕಾರಿ ಪ್ರಿಯದರ್ಶಿನಿ ಹೇಳಿದ್ದಾರೆ. ದಾವಣಗೆರೆ ತಾಲ್ಲೂಕಿನ ಆಲೂರು ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಪೋಷಣ್ ಮಾಸಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ೨೦೧೮ ರಲ್ಲಿ ಆರಂಭಗೊಂಡ ಕೇಂದ್ರ ಸರ್ಕಾರದ ಈ ಯೋಜನೆ ಗರ್ಭಿಣಿಯರು,

ಬಾಣಂತಿಯರು ಹಾಗೂ ಮಕ್ಕಳ ಸಮಗ್ರ ಬೆಳವಣಿಗೆಗೆ ಸಹಕಾರಿಯಾಗಿದೆ ಎಂದು ಹೇಳಿದರು. ಅಪೌಷ್ಟಿಕತೆಯಿಂದ ಬಳಲುತ್ತಿರುವ ಮಕ್ಕಳನ್ನು ಎನ್‌ಆರ್‌ಸಿ ಕೇಂದ್ರಕ್ಕೆ ದಾಖಲಿಸಿ ೧೪ ದಿನಗಳ ಕಾಲ ಪೌಷ್ಟಿಕ ಆಹಾರ ನೀಡುವುದು ಹಾಗೂ ಈ ಕುರಿತು ತಾಯಿಗೆ ತಿಳುವಳಿಕೆ ನೀಡುವುದು ಸ್ತನ್ಯಪಾನ ಸಪ್ತಾಹ, ಸಮುದಾಯ ಆಧಾರಿತ ಚಟುವಟಿಕೆಗಳನ್ನು ಯೋಜನೆಯಡಿ ಕೈಗೊಳ್ಳಲಾಗುವುದು ಎಂದು ಅವರು ಹೇಳಿದರು.

**<><*<><>*><>**

ನಾಗರಿಕ ವಿಮಾನಯಾನ ಇಲಾಖೆ ಹಾಗೂ ವಿಮಾನ ನಿಲ್ದಾಣ ಪ್ರಾಧಿಕಾರ ವತಿಯಿಂದ ಇದೇ ೧೧ ಹಾಗೂ ೧೨ ರಂದು ನವದೆಹಲಿಯಲ್ಲಿ ನಡೆಯಲಿರುವ ಎರಡನೇ ಏಷಿಯಾ ಪೆಸಿಫಿಕ್ ಸಚಿವ ಸಮ್ಮೇಳನದ ಹಿನ್ನೆಲೆಯಲ್ಲಿ " ಏಕ್ ಪೇಡ್ ಮಾ ಕೇ ನಾಮ್ " ಅಭಿಯಾನ ನಡೆಯುತ್ತಿದೆ. ಈ ಹಿನ್ನೆಲೆಯಲ್ಲಿ ಕಲಬುರಗಿ ವಿಮಾನ ನಿಲ್ದಾಣದ ಮುಂದೆ ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ಸಂಸದ ರಾಧಾಕೃಷ್ಣ ದೊಡ್ಡಮನಿ ಅವರು ಕಲಬುರಗಿ ವಿಮಾನ ನಿಲ್ದಾಣದ ಮುಂದೆ ಸಸಿಗಳನ್ನು ನೆಟ್ಟು ನೀರೆರೆದರು. ಈ ಸಂದರ್ಭದಲ್ಲಿ ವಿಮಾನನಿಲ್ದಾಣ ನಿರ್ದೇಶಕ ಡಾ ಚಿಲ್ಕಾಮಹೇಶ್ ಸೇರಿದಂತೆ ಹಲವರಿದ್ದರು.

**<><*<><>*><>**

ಕನ್ನಡದ ಹಿರಿಯ ಪತ್ರಕರ್ತ ವಸಂತ ನಾಡಿಗೇರ್ ಹೃದಯಾಘಾತದಿಂದ ಇಂದು ಮುಂಜಾನೆ ನಿಧನರಾಗಿದ್ದಾರೆ. ಕಳೆದ ಮೂರೂವರೆ ದಶಕದಿಂದ ಕನ್ನಡ ಪತ್ರಿಕೋದ್ಯಮದಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಅವರು ಹಲವು ಪತ್ರಿಕೆಗಳಲ್ಲಿ ಸಂಪಾದಕರಾಗಿ ಕಾರ್ಯನಿರ್ವಹಿಸಿದ್ದರು. ವಸಂತ ನಾಡಿಗೇರ್ ಅವರ ಅಗಲಿಕೆಯಿಂದ ಪತ್ರಿಕಾರಂಗಕ್ಕೆ ಬಹುದೊಡ್ಡ ನಷ್ಟವಾಗಿದೆ. ಮೃತರ ಆತ್ಮಕ್ಕೆ ಶಾಂತಿ ಸಿಗಲೆಂದು ಪ್ರಾರ್ಥಿಸುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಜಾಲತಾಣದಲ್ಲಿ ಸಂತಾಪ ವ್ಯಕ್ತಪಡಿಸಿದ್ದಾರೆ. ವಸಂತ ನಾಡಿಗೇರ್ ಆತ್ಮಕ್ಕೆ ಚಿರಶಾಂತಿ ಸಿಗಲಿ. ಈ ದುಃಖವನ್ನು ಭರಿಸುವ ಶಕ್ತಿಯನ್ನು ಭಗವಂತ ಅವರ ಕುಟುಂಬಕ್ಕೆ ನೀಡಲಿ ಎಂದು ಕೇಂದ್ರ ಸಚಿವ ಕುಮಾರಸ್ವಾಮಿ ಎಕ್ಸ್ ನಲ್ಲಿ ಸಂತಾಪ ಸೂಚಿಸಿದ್ದಾರೆ.

**<><*<><>*><>**

ಚಿಕ್ಕಮಗಳೂರು ಜಿಲ್ಲಾಡಳಿತ ಹಾಗೂ ಕಾಫಿ ಮಂಡಳಿ ವತಿಯಿಂದ ನಗರದ ಕಾಫಿ ಮಂಡಳಿ ಕಚೇರಿಯಲ್ಲಿ ಇದೇ ತಿಂಗಳ ೧೧ ರಂದು ಒಂದು ದಿನದ ಕಾರ್ಯಗಾರ ಮತ್ತು ತರಭೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಗಾರದಲ್ಲಿ ವಿದೇಶಿ ಹಣ್ಣು, ವಾಣಿಜ್ಯ ಪುಷ್ಪಗಳ ಬೇಸಾಯ ಪದ್ಧತಿ ಹಾಗೂ ಮಾರುಕಟ್ಟೆಗೆ ಸಂಬಂದಿಸಿದಂತೆ ನುರಿತ ತಜ್ಞರು ತರಬೇತಿ ನೀಡಲಿದ್ದಾರೆ. ಆಸಕ್ತರು ಕಾರ್ಯಗಾರದಲ್ಲಿ ಪಾಲ್ಗೊಂಡು ಮಾಹಿತಿ ಪಡೆಯಬಹುದು ಎಂದು ಪ್ರಕಟಣೆ ತಿಳಿಸಿದೆ.

**<><*<>** ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು **<>*><>**